# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1587

ಸದಸ್ಯರ ಹೆಸರು : ಶ್ರೀ ಪಿ.ಹೆಚ್ ಪೂಜಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರಿಸುವ ದಿನಾಂಕ : 19.12.2025.

ಉತ್ತರಿಸುವವರು : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದಲ್ಲಿನ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿನ ಗ್ರಾಮಗಳ ಗ್ರಾಮಠಾಣಾ ಗಡಿ ತುಂಬಾ ಹಿಂದೆ ನಿಗದಿಪಡಿಸಿದ್ದು; ಪ್ರಸ್ತುತ ವಿಸ್ತರಣೆಯಾಗಿರುವ ಪ್ರದೇಶ ಒಳಗೊಂಡಂತೆ ಹೊಸದಾಗಿ ಸರ್ವೆ ಮಾಡಿಸಿ ಗ್ರಾಮ ಠಾಣಾವನ್ನು ಪುನರ್ ನಿಗದಿಪಡಿಸುವ ಕುರಿತು; ಸರ್ಕಾರದ ಆದೇಶ ಸಂಖ್ಯೆ ಗ್ರಾಅಪ /441 ಗ್ರಾಪಂಅ 2016 (ಭಾಗ-3) ದಿನಾಂಕ:08.10.2016 ರಂದು ಸುತ್ತೋಲೆ ಹೊರಡಿಸಿದ್ದು ಈವರೆಗೆ ಸದರಿ ಸುತ್ತೋಲೆ ಪ್ರಕಾರ ಗ್ರಾಮಠಾಣಾ ಪುನರ್ ನಿಗದಿ ಪಡಿಸುವ ಕಾರ್ಯವು ಸಮರ್ಪಕವಾಗಿ ಜಾರಿ ಆಗದೇ ಇರುವ ಕುರಿತು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ, ಸರ್ಕಾರ ಕೈಗೊಂಡ ಕ್ರಮಗಳೇನು; | ಬಂದಿದೆ.<br><br>ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಹಾಗೂ ಕಂದಾಯ ಇಲಾಖೆಯ ಜಂಟಿ ಸುತ್ತೋಲೆ ಸಂಖ್ಯೆ: ಗ್ರಾಅಪ 441 ಗ್ರಾಪಂಅ 2016, (ಭಾಗ-3), ದಿನಾಂಕ:28-10-2016ರಲ್ಲಿ ಗ್ರಾಮಗಳ ಗ್ರಾಮ ಠಾಣಾ ಗಡಿಯನ್ನು ಪ್ರಸ್ತುತ ವಿಸ್ತರಣೆಯಾಗಿರುವ ಪ್ರದೇಶವನ್ನು ಒಳಗೊಂಡಂತೆ ಹೊಸದಾಗಿ ಸರ್ವೆ ಮಾಡಿಸಿ, ಗ್ರಾಮ ಠಾಣಾವನ್ನು ಪುನರ್ ನಿಗಧಿಪಡಿಸುವ ಬಗ್ಗೆ ಮಾರ್ಗಸೂಚಿಗಳನ್ನು ನೀಡಲಾಗಿದೆ.<br><br>ಈ ಸುತ್ತೋಲೆ ಆಧಾರದ ಮೇಲೆ ಭೂ ಮಾಪನ ಕಂದಾಯ ವ್ಯವಸ್ಥೆ ಮತ್ತು ಭೂ ದಾಖಲೆಗಳ ಇಲಾಖೆ ಸುತ್ತೋಲೆ ಸಂಖ್ಯೆ: ಪಿ. ಎಂ. ಯು.ಎಂ.ಒಜೆ. ಸಿಐಆರ್-1/2016-17, ದಿನಾಂಕ:20-12-2016 ರಲ್ಲಿ ಮಾರ್ಗಸೂಚಿಗಳನ್ನು ನೀಡಲಾಗಿದೆ.<br><br>ದಿನಾಂಕ:06-11-2024 ರಂದು ಮಾನ್ಯ ಕಂದಾಯ ಸಚಿವರ ಅಧ್ಯಕ್ಷತೆಯಲ್ಲಿ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಮತ್ತು ಮಾನ್ಯ ಪೌರಾಡಳಿತ ಸಚಿವರ ಉಪಸ್ಥಿತಿಯಲ್ಲಿ ಇ-ಸ್ವತ್ತು/ಇ-ಖಾತಾ ಮತ್ತು ಕಾವೇರಿ 2.0 ಸಂಯೋಜನೆಗೆ ಸಂಬಂಧಿಸಿದಂತೆ ನಡೆದ ಸಭೆಯಲ್ಲಿ ಗ್ರಾಮ ಠಾಣಾ ಗಡಿಯನ್ನು ಪುನರ್ ನಿಗಧಿಪಡಿಸುವ ಬಗ್ಗೆ ಸರ್ವೆ ಇಲಾಖೆಯಲ್ಲಿ service based mode ನಲ್ಲಿ ಕಾರ್ಯನಿರ್ವಹಿಸುತ್ತಿರುವ ಲೈಸೆನ್ಸ್‌ಡ್ ಸರ್ವೆಯರ್‌ಗಳ ಸೇವೆಯನ್ನು ಪಡೆದು ಗ್ರಾಮದ ಕಟ್ಟಡ ಮತ್ತು ನಿವೇಶನಗಳ ಮೋಜಣಿ ನಡೆಸಿ ದಾಖಲೆಗಳನ್ನು ಹಾಗೂ ನಕ್ಷೆಗಳನ್ನು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯು ಅನುಸರಿಸುತ್ತಿರುವ ವಿಧಿ ವಿಧಾನದ ಮಾದರಿಯಲ್ಲಿ ಸಿದ್ಧಪಡಿಸುವಂತೆ ಸಲಹೆ ನೀಡಲಾಗಿದೆ.<br><br>ಗ್ರಾಮ ಠಾಣಾ ವಿಸ್ತರಣೆಗೆ ಸಂಬಂಧಿಸಿದಂತೆ ಅಗತ್ಯ ಕ್ರಮ ಕೈಗೊಳ್ಳಲು ಕಂದಾಯ ಇಲಾಖೆಗೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ ದಿನಾಂಕ:14.05.2025ರಂದು ಪತ್ರ ಮುಖೇನ ಕೋರಲಾಗಿದೆ. |

| | | |
|---|---|---|
| (ಆ) | ಬಾಗಲಕೋಟೆ ವಿಜಯಪುರ ಜಿಲ್ಲೆಗಳಲ್ಲಿ ಸದರಿ ಸುತ್ತೋಲೆಯ ಜಾರಿಗೆಗಿಂತ ಮೊದಲು ನಿಗದಿಪಡಿಸಿದ್ದ ಗ್ರಾಮಠಾಣಾ ಪ್ರದೇಶವೆಷ್ಟು; ಸುತ್ತೋಲೆ ಜಾರಿ ಆದ ನಂತರ ಪುನರ್ ನಗದಿ ಪಡಿಸಿದ ಗ್ರಾಮ ಠಾಣ ಪ್ರದೇಶವೆಷ್ಟು; (ತಾಲ್ಲೂಕುವಾರು ಹಾಗೂ ಗ್ರಾಮ ಪಂಚಾಯಿತಿವಾರು ಮಾಹಿತಿ ನೀಡುವುದು); | ದಿನಾಂಕ:28.10.2016ರ ಸುತ್ತೋಲೆಯ ಜಾರಿಗಿಂತ ಮೊದಲು ಬಾಗಲಕೋಟೆ ಜಿಲ್ಲೆಯಲ್ಲಿ 7159 ಎಕರೆ ಮತ್ತು ವಿಜಯಪುರ ಜಿಲ್ಲೆಯಲ್ಲಿ 7620 ಎಕರೆ 9 ಗುಂಟೆ ಗ್ರಾಮ ಠಾಣಾ ಪ್ರದೇಶವಿರುತ್ತದೆ.<br><br>ತಾಲ್ಲೂಕುವಾರು ಮತ್ತು ಗ್ರಾಮ ಪಂಚಾಯಿತಿವಾರು ಮಾಹಿತಿಯನ್ನು ಅನುಬಂಧದಲ್ಲಿ ನೀಡಿದೆ. |

**ಸಂಖ್ಯೆ:** ಗ್ರಾಅಪ 1022 ಗ್ರಾಪಂಅ 2025

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.